ಮೈಸೂರ ಗೆಜೆಟ್ಟ

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜುಲೈ ತಾ॥ 30, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೀಫ್ ಜಡ್ಜ್‌ರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನ್ಯಾಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡ್ಯನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡ್ಯನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕೌಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ಯನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜೂ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪೈಕೇಟೂದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್ಟ್ರೋಲರ್.

ಮೈಸೂರು ಜೀಫ್ ಕೋರ್ಟ್‌ನಲ್ಲಿ.

ಸಿವಿಲ್ ತರಫು.

ತಾರೀಖು 18ನೇ ಜುಲೈ 1887ನೇ ಈಸವಿ.

ಸ್ಯ 1886ನೇ ಇಸವಿ ಫೆಬ್ರುಅರಿ 5ನೇ ತಾರೀಖಿನ ನಿಬಂಧನೆಗಳಿಗೆ ಬದಲಾಗಿ ಈ ಕೆಳಗೆ ಬರೆದಿರುವುದನ್ನು ಸೇರಿಸಿಕೊಳ್ಳಬೇಕೆಂದು ಜೀಫ್ ಕೋರ್ಟ್‌ನವರು ಅಪ್ಪಣೇ ಮಾಡುತ್ತಾರೆ:—

(1.) ದಾವ್ಯಾ ಅರ್ಜಿಗಳು ಅಪ್ಪೀಲ್ ಅರ್ಜಿಗಳು ಮತ್ತು ಇತರ ಅರ್ಜಿ ಇವುಗಳಿಗೆ ಕಡಮೇ ಸ್ಟ್ಯಾಂಪು ಹಾಕಿದ್ದಲ್ಲಿ ಆ ಸ್ಟ್ಯಾಂಪು ಭರ್ತೀ ಮಾಡುವದಕ್ಕಾಗಿ ಬಂದು ವಾಯಿದೆಯನ್ನು ನೇಮಕ ಮಾಡಿ, ಅವುಗಳನ್ನು ವಾಪಸು ಮಾಡುವದಕ್ಕೆ ರೆಜಿಸ್ಟ್ರಾರಿಗೆ